ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 16–10–2019

## ಪತ್ರಿಕಾ ಆಮಂತ್ರಣ

1. ಕರ್ನಾಟಕ ಜಾನಪದ ಪರಿಷತ್ತು, ಬೆಂಗಳೂರು ಹಾಗೂ ಕರ್ನಾಟಕ ಸಂಘ (ರಿ) ಮಂಡ್ಯ ಇವರ ಸಂಯುಕ್ತಾಶ್ರಯದಲ್ಲಿ ಮೂಡಲಪಾಯ ಯಕ್ಷಗಾನ : ಅಂದು–ಇಂದು ಹಾಗೂ ರಾಜ್ಯ ಮಟ್ಟದ ವಿಚಾರ ಸಂಕಿರಣ ಕಾರ್ಯಕ್ರಮ:

ಉದ್ಘಾಟನೆ:

ಶ್ರೀ ಸಿ.ಟಿ. ರವಿ,
ಕನ್ನಡ ಮತ್ತು ಸಂಸ್ಕೃತಿ ಹಾಗೂ ಪ್ರವಾಸೋದ್ಯಮ ಸಚಿವರು

ಅಧ್ಯಕ್ಷತೆ:

ನ್ಯಾಯಮೂರ್ತಿ ಎ.ಜೆ. ಸದಾಶಿವ,
ನಿವೃತ್ತ ನ್ಯಾಯಾಧೀಶರು

ದಿನಾಂಕ: 17–10–2019 ಗುರುವಾರ, ಸಮಯ: ಬೆಳಿಗ್ಗೆ 10–30 ಗಂಟೆಗೆ

ಸ್ಥಳ: ನಯನ ಸಭಾಂಗಣ, ಕನ್ನಡ ಭವನ ಆವರಣ, ಜೆ. ಸಿ. ರಸ್ತೆ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

# ವಿದೇಶಿ ಪಟಾಕಿ ಮಾರಾಟಕ್ಕೆ ಅನುಮತಿ ಇಲ್ಲ

**ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ)**

ಭಾರತದ ವಿದೇಶಿ ವ್ಯಾಪಾರ ನೀತಿಯಲ್ಲಿ ವಿದೇಶಗಳಿಂದ ಪಟಾಕಿಗಳನ್ನು ಆಮದು ಮಾಡಿಕೊಳ್ಳುವುದನ್ನು ನಿರ್ಬಂಧಿಸಲಾಗಿರುತ್ತದೆ. ವಿದೇಶಿ ಪಟಾಕಿಗಳಿಂದಾಗಿ ದೇಶೀಯ ಗೃಹ ಕೈಗಾರಿಕೆಗಳು, ಪ್ರಕೃತಿ ಸಾರ್ವಜನಿಕ ಭದ್ರತೆ ಹಾಗೂ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಆದುದರಿಂದ, ಮುಂದಿನ ದಿನಗಳಲ್ಲಿ ದೀಪಾವಳಿ ಹಬ್ಬವು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ವಿದೇಶದಿಂದ ಆಮದಾಗುವ ಪಟಾಕಿಗಳು ಪ್ರಕೃತಿ ಹಾಗೂ ಸಾರ್ವಜನಿಕರ ಮೇಲೆ ದುಷ್ಪರಿಣಾಮ ಬೀರುವುದರಿಂದ ಸದರಿ ಪಟಾಕಿಗಳನ್ನು ಮಾರಾಟ ಮಾಡಲು ತಾತ್ಕಾಲಿಕ ಪರವಾನಗಿಗಳನ್ನು ನೀಡುವಾಗ, ಸಂಬಂಧಪಟ್ಟ ಅಧಿಕಾರಿಗಳು ಸ್ಫೋಟಕ ಕಾಯ್ದೆ 2008, ನಿಯಮ 84 ರ ಪ್ರಕಾರ ಪರವಾನಿಗೆ ನೀಡಬೇಕಾಗುತ್ತದೆ. ಆದುದರಿಂದ, ಪಟಾಕಿಗಳನ್ನು ಮಾರಾಟ ಮಾಡಲು ಪರವಾನಿಗಿ ನೀಡುವಾಗ ಭಾರತೀಯ ತಯಾರಿಕಾ ಕಂಪನಿಗಳಿಗೆ ಮಾತ್ರ ಆದ್ಯತೆ ನೀಡುವಂತೆ, ವಿದೇಶದಿಂದ ಆಮದಾಗುವ ಪಟಾಕಿಗಳನ್ನು ಮಾರಾಟ ಮಾಡಲು ಅನುಮತಿಯನ್ನು ನೀಡದಂತೆ ಹಾಗೂ ವಿದೇಶಗಳಿಂದ ಆಮದಾಗುವ ಪಟಾಕಿಗಳನ್ನು ಮಾರಾಟ ಮಾಡುವವರ ವಿರುದ್ಧ ಸೂಕ್ತ ಕ್ರಮಕೈಗೊಳ್ಳುವಂತೆ ಎಲ್ಲಾ ಜಿಲ್ಲಾಧಿಕಾರಿಗಳು, ಎಲ್ಲಾ ಪೊಲೀಸ್ ಆಯುಕ್ತರುಗಳು ಹಾಗೂ ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿರುತ್ತದೆ. ಒಂದು ವೇಳೆ ವಿದೇಶಗಳಿಂದ ಆಮದಾಗಿರುವ ಪಟಾಕಿಗಳನ್ನು ಮಾರಾಟ ಮಾಡುವುದು ಕಂಡುಬಂದಲ್ಲಿ ಸಾರ್ವಜನಿಕರು ಜಿಲ್ಲಾಧಿಕಾರಿಗಳು ಅಥವಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಕೂಡಲೇ ಈ ಬಗ್ಗೆ ದೂರು ನೀಡುವುದು ಹಾಗೂ ಪಟಾಕಿಗಳನ್ನು ಸಿಡಿಸುವಾಗ ಸಾರ್ವಜನಿಕರು ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಗೃಹ ಸಚಿವ ಶ್ರೀ ಬಸವರಾಜ ಬೊಮ್ಮಾಯಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ)**

2019-20 ನೇ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ರಾಜ್ಯದಾದ್ಯಂತ ಹೊಸದಾಗಿ ವಾಣಿಜ್ಯ (ಬೆರಳಚ್ಚು ಹಾಗೂ ಶೀಘಲಿಪಿ) ಶಾಲೆಗಳನ್ನು ಹಾಗೂ ಗಣಕಯಂತ್ರ ಶಿಕ್ಷಣ ಶಾಲೆಗಳನ್ನು ಪ್ರಾರಂಭಿಸಲು ಅಕ್ಟೋಬರ್ 31 ರ ವರೆಗೆ ಬೆಂಗಳೂರು ವಿಭಾಗಕ್ಕೆ ಸಂಬಂಧಪಟ್ಟಂತೆ ಸಹನಿರ್ದೇಶಕರು-1, ಬೆಂಗಳೂರು ವಿಭಾಗ, ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ನೃಪತುಂಗ ರಸ್ತೆ, ಕೆ. ಆರ್. ವೃತ್ತ, ಬೆಂಗಳೂರು ಇವರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಕಲಬುರಗಿ ವಿಭಾಗಕ್ಕೆ ಸಂಬಂಧಪಟ್ಟಂತೆ ಸಹನಿರ್ದೇಶಕರು, ಅಪರ ಆಯುಕ್ತರ ಕಚೇರಿ, ಕಲಬುರಗಿ ಇವರಿಗೆ ಬೆಳಗಾವಿ ಹಾಗೂ ಮೈಸೂರು ವಿಭಾಗಗಳಿಗೆ ಸಂಬಂಧಪಟ್ಟಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯಾ ವಿಭಾಗದ ಸಹನಿರ್ದೇಶಕರಿಗೆ ಅರ್ಜಿಯನ್ನು ಸಲ್ಲಿಸುವುದು.

ರಾಜ್ಯದಲ್ಲಿನ ಎಲ್ಲಾ ಅಂಗೀಕೃತ ವಾಣಿಜ್ಯ ಶಾಲೆಗಳಲ್ಲಿ ಪ್ರಸ್ತುತ ನಡೆಸಲಾಗುತ್ತಿರುವ ಬೆರಳಚ್ಚು/ಶೀಘ್ರಲಿಪಿ ಜೊತೆಗೆ ಕಂಪ್ಯೂಟರ್ ಶಿಕ್ಷಣ ಅಳವಡಿಸಿಕೊಳ್ಳಲು ಸರ್ಕಾರ 2006 ರಲ್ಲಿ ಆದೇಶಿಸಿದ್ದು ಅದರಂತೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ (ವೆಬ್‌ಸೈಟ್ ವಿಳಾಸ www.schooleducation.kar.nic.in- secondary education --- commerce education ದಲ್ಲಿ ಪರಿಶೀಲಿಸುವುದು ಹಾಗೂ ಹಿರಿಯ ಸಹಾಯಕ ನಿರ್ದೇಶಕರು (ವಾಣಿಜ್ಯ) ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕೈಗಾರಿಕಾ ನೀತಿ-2020 ಕರಡು ಪ್ರತಿ ಕುರಿತು ಸಭೆ ನಡೆಸಿದ ಸಚಿವ ಶ್ರೀ ಜಗದೀಶ್ ಶೆಟ್ಟರ್

ಕೈಗಾರಿಕಾ ನೀತಿ -2020 ರ ಕರಡು ಪ್ರತಿ ಸಿದ್ದತೆ ಸಂಬಂಧ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರು ಕೈಗಾರಿಕಾ ಇಲಾಖೆ ಅಧಿಕಾರಿಗಳೊಂದಿಗೆ ಮಹತ್ತರ ಸಭೆ ನಡೆಸಿ ಕರಡು ಪ್ರತಿಯ ಮಾಹಿತಿ ಪಡೆದರು.

ಕಳೆದ ಕೈಗಾರಿಕಾ ನೀತಿ ಅವಧಿ ಪೂರ್ಣಗೊಂಡಿದೆ. ನೂತನ ಕೈಗಾರಿಕಾ ನೀತಿ ಸಿದ್ದತೆ ನಡೆಯುತ್ತಿದ್ದು, ಇದರ ಕರಡು ಪ್ರತಿಯ ಕುರಿತು ಇಂದು ಉದ್ಯೋಗ ಮಿತ್ರ ಭವನದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕೆಲ ಸಲಹೆ ಸೂಚನೆ ನೀಡಿದರು.

ಕಳೆದ ಕೈಗಾರಿಕಾ ನೀತಿಯ ಅಡಿಯಲ್ಲಿ 5 ಲಕ್ಷ ಕೋಟಿ ಹೂಡಿಕೆಗೆ ಗುರಿ ಹೊಂದಿ, 3.75 ಲಕ್ಷ ಕೋಟಿ ಹೂಡಿಕೆ ಹರಿದು ಬಂದಿತ್ತು. ಅಂತೆಯೇ 20 ಲಕ್ಷ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಲಾಗಿತ್ತು. ಈ ಸಾಲಿನಲ್ಲಿಯೂ 5 ಲಕ್ಷ ಕೋಟಿ ಹೂಡಿಕೆಯ ಗುರಿ ಹೊಂದಲಾಗಿದ್ದು, ಉದ್ಯೋಗ ಸೃಷ್ಟಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಿದರು.

ಬಹುತೇಕ ಹೂಡಿಕೆದಾರರು ಬೆಂಗಳೂರಿನಲ್ಲಿ ಹೂಡಿಕೆ ಮಾಡಲು ಆಸಕ್ತಿ ತೋರುತ್ತಾರೆ. ಈ ನಿಟ್ಟಿನಲ್ಲಿ
ಬೆಂಗಳೂರನ್ನು ೨ ಟಯರ್ ಸಿಟಿಯಾಗಿ ನಿರ್ಮಾಣ ಮಾಡಲು ಅಗತ್ಯ ಮೂಲಸೌಕರ್ಯ ಒದಗಿಸಬೇಕು. ಅದಕ್ಕೆ ಬೇಕಾದ ವ್ಯವಸ್ಥೆ ಆಗಬೇಕು ಎಂದು ಅಭಿಪ್ರಾಯಪಟ್ಟರು.
ಈಗಾಗಲೇ ೯ ಜಿಲ್ಲೆಯಲ್ಲಿ ವಿವಿಧ ವಲಯಗಳ ಕ್ಲಸ್ಟರ್ ನಿರ್ಮಾಣ ಪ್ರಗತಿಯಲ್ಲಿದೆ. ಹೂಡಿಕೆದಾರರನ್ನು ಇತರೆ ಜಿಲ್ಲೆಯತ್ತ ಆಕರ್ಷಿಸಲು ಬೇಕಾದ ಸೌಕರ್ಯ ಒದಗಿಸುವ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೋದ್ಯಮಕ್ಕೆ ಹೆಚ್ಚಿನ ಆದ್ಯತೆಯನ್ನು ಸಹ ನೀಡಲಾಗುತ್ತಿದೆ. ಎಂಎಸ್ಎಂಇ ಕ್ಷೇತ್ರ ಪ್ರೋತ್ಸಾಹಿಸಲು ಕಳೆದ ಬಜೆಟ್‌ನಲ್ಲಿ ಘೋಷಿಸಿದ "ಸಾರ್ಥಕ್" ಯೋಜನೆ ಅನುಷ್ಠಾನದತ್ತಲೂ ಹೆಚ್ಚಿನ ಗಮನಹರಿಸಲಾಗುತ್ತಿದೆ.
ಎಂಎಸ್ಎಂಇ ಉದ್ಯಮಿದಾರರನ್ನು ಉತ್ತೇಜಿಸಲು ಸರಕಾರದ ವತಿಯಿಂದ ನೀಡುವ ಸಬ್ಸಿಡಿ ಮೊತ್ತವನ್ನು ಹೆಚ್ಚಿಸಿರುವ ಬಗ್ಗೆಯೂ ಮಾಹಿತಿ ನೀಡಿದರು.

ಕೈಗಾರಿಕಾ ನೀತಿಯಲ್ಲಿ ಸ್ಪೆಷಲ್ ಇನ್‌ವೆಸ್ಟ್‌ಮೆಂಟ್ ರೀಜಿನಲ್‌ಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಗುಜರಾತ್‌ನಲ್ಲಿ ಈ ವಲಯಕ್ಕೆ ಹೆಚ್ಚಿನ ಒತ್ತು ನೀಡಲಾಗಿದ್ದು, ಇದಕ್ಕಾಗಿಯೇ ಗುಜರಾತ್‌ನಲ್ಲಿ
"ಸ್ಪೆಷಲ್ ಇನ್‌ವೆಸ್ಟ್‌ಮೆಂಟ್ ರೀಜಿನಲ್ 2009 " ಕಾಯ್ದೆ ತರಲಾಗಿದೆ. ಈ ಕಾಯ್ದೆಯನ್ನು ಅಧ್ಯಯನ ನಡೆಸಿ ನಂತರ ಕರ್ನಾಟಕದಲ್ಲಿ ಅನುಷ್ಠಾನ ಮಾಡುವಂತೆಯೂ ಅಧಿಕಾರಿಗಳಿಗೆ ಸೂಚಿಸಿದರು.

* 2014-15 ರಲ್ಲಿ ಕೇಂದ್ರ ಸರಕಾರ ಘೋಷಿಸಿದ ಬೆಂಗಳೂರು-ಮುಂಬೈ ಎಕನಾಮಿಕ್ ಕಾರಿಡಾರ್ ಚುರುಕುಗೊಳಿಸಿ. ಇದಕ್ಕೆ ಕೇಂದ್ರದಿಂದ ಬರಬೇಕಾದ ಅನುದಾನದ ವೆಚ್ಚದ ಮಾಹಿತಿ ಸಿದ್ಧಪಡಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

* ಭೂ ಹಂಚಿಕೆ ಮಾಡುವ ease of doing business ನಲ್ಲಿ ಏಕಗವಾಕ್ಷಿ ಪದ್ಧತಿ ತರುವ ನಿಟ್ಟಿನಲ್ಲಿ ಅಧಿಕಾರಿಗಳು ಕೆಲಸ ಮಾಡಬೇಕಿದೆ. ಇತರೆ ರಾಜ್ಯದಲ್ಲಿ ಏಕಗವಾಕ್ಷಿ ಪದ್ಧತಿ ಇದೆ. ಭೂಮಿ ಹಂಚಿಕೆ ವ್ಯವಸ್ಥೆಯು ಶೀಘ್ರವೇ ಏಕಗವಾಕ್ಷಿ ಆಗಬೇಕಿದೆ ಎಂದು ಅಭಿಪ್ರಾಯಪಟ್ಟರು.

* ಇನ್ನು, ಇಂಡಸ್ಟ್ರಿಯಲ್ ಟೌನ್‌ಶಿಪ್ ನಿರ್ಮಾಣದಲ್ಲಿ ಗುಜರಾತ್, ತಮಿಳುನಾಡು ಯಶಸ್ವಿಯಾಗಿದೆ. ಇದರ ಬಗ್ಗೆಯೂ ಅಧ್ಯಯನ ನಡೆಸುವಂತೆಯೂ ಸಲಹೆ ನೀಡಿದರು.

ಕರ್ನಾಟಕ ಕೈಗಾರಿಕಾ ಅಭಿವೃದ್ಧಿ ಮಂಡಳಿ (ಕೆಐಡಿಬಿ) ಕಟ್ಟಡಗಳ ಅಭಿವೃದ್ಧಿಗೆ ಅನುಸರಿಸುವ ಮಾನದಂಡದ ಬಗ್ಗೆ ಮಾಹಿತಿ ಪಡೆದರು. ಕೆಐಡಿಬಿ ಬಗ್ಗೆ ಸಾಕಷ್ಟು ದೂರು ಬರುತ್ತಿವೆ. ಹೀಗಾಗಿ ಕೆಐಡಿಬಿ ಅಧಿಕಾರಿಗಳೊಂದಿಗೆ ಸಭೆ ನಡೆಸುವುದಾಗಿ ತಿಳಿಸಿದರು.

ಒಟ್ಟಾರೆ ನೂತನ ಕೈಗಾರಿಕಾ ನೀತಿ ಕೈಗಾರಿಕಾ ಸ್ನೇಹಿಯಾಗಿರುವ ಜೊತೆಗೆ ಮಹಿಳಾ ಉದ್ಯಮಿಗಳು, ಸೂಕ್ಷ್ಮ ಮತ್ತು ಸಣ್ಣ ಉದ್ದಿಮೆದಾರರು ಸೇರಿದಂತೆ ಕೈಗಾರಿಕೋದ್ಯಮಿಗಳಿಗೆ ಸ್ನೇಹಮಯವಾಗಿರಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತ, ಕೈಗಾರಿಕಾಭಿವೃದ್ಧಿ ಆಯುಕ್ತೆ ಗುಂಜನ್ ಕೃಷ್ಣ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.
ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರು ಇಂದು ಕೈಗಾರಿಕಾ ಇಲಾಖೆಯ "ಕಾಂಪಿಟ್ ವಿಥ್ ಚೈನಾ" ದ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.
ಸಭೆಯಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತ, ಕೈಗಾರಿಕಾಭಿವೃದ್ಧಿ ಆಯುಕ್ತೆ ಗುಂಜನ್ ಕೃಷ್ಣ ಉಪಸ್ಥಿತರಿದ್ದರು.

ಉತ್ಪನ್ನ ಆಧಾರಿತ ಕೈಗಾರಿಕಾ ಕ್ಲಸ್ಟರ್ ಅಭಿವೃದ್ಧಿ ಯೋಜನೆ"ಯಡಿ ರಾಜ್ಯದ 9 ಜಿಲ್ಲೆಯಲ್ಲಿ ವಿವಿಧ ಕ್ಲಸ್ಟರ್ ತೆರೆಯಲಾಗುತ್ತಿದ್ದು, ಇದರ ಕಾರ್ಯಪ್ರಗತಿ ಬಗ್ಗೆ ಪರಿಶೀಲನೆ ನಡೆಸಿದರು. ಕ್ಲಸ್ಟರ್ ನಿರ್ಮಾಣಕ್ಕೆ ಬಹುತೇಕ ಉತ್ತಮ ಸ್ಪಂದನೆ ಬರುತ್ತಿದ್ದು, ಪ್ರಗತಿ ಶೀಘ್ರಗತಿಯಲ್ಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. .

# ಅಕ್ಟೋಬರ್ 18 ರಂದು ತಲಕಾವೇರಿ ತೀರ್ಥೋದ್ಭವ

**ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ)**

ಶ್ರೀ ಭಗಂಡೇಶ್ವರ –ತಲಕಾವೇರಿ ದೇವಾಲಯ, ಭಾಗಮಂಡಲ, ಕೊಡಗು ಜಿಲ್ಲೆಯಲ್ಲಿ ಅಕ್ಟೋಬರ್ 18 ರ ಮುಂಜಾನೆ 00.59 ಗಂಟೆಗೆ ಪವಿತ್ರ ತೀರ್ಥೋದ್ಭವ ನಡೆಯಲಿದೆ. ಶ್ರೀ ಕ್ಷೇತ್ರ ತಲಕಾವೇರಿ ಪವಿತ್ರ ತೀರ್ಥೋದ್ಭವ ಸಮಾರಂಭಕ್ಕೆ ಕಂದಾಯ ಮತ್ತು ಪೌರಾಡಳಿತ ಸಚಿವ ಶ್ರೀ ಆರ್. ಅಶೋಕ, ವಸತಿ ಸಚಿವ ಶ್ರೀ ವಿ. ಸೋಮಣ್ಣ ಪಾಲ್ಗೊಳ್ಳುತ್ತಿದ್ದಾರೆ.